ಹಾಗೂ ಜಾರಿ ಕಾರ್ಯಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸುತ್ತೋಲೆ/ಪತ್ರಗಳ ಮೂಲಕ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿರುತ್ತದೆ

ಅಲ್ಲದೆ ಈ ಕುರಿತು ಪೊಲೀಸ್ ಇಲಾಖೆಯಲ್ಲಿ ಸ್ಥಾಪಿತವಾಗಿರುವ ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ ಎಂಬ ವಿಶೇಷ ಘಟಕವೂ ಸಹ ನಿರಂತರ ಕಾರ್ಯಾಚರಣೆ ನಡೆಸುತ್ತಿದ್ದು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ 2 ತಿಂಗಳಿಗೊಮ್ಮೆ ನಡೆಯುತ್ತಿರುವ ಸಮನ್ವಯ ಸಮಿತಿ ಸಭೆಯಲ್ಲೂ ಅಬಕಾರಿ ಅಕ್ರಮ ಕುರಿತು ಅಗತ್ಯ ನಿರ್ದೇಶನಗಳನ್ನು ನೀಡಲಾಗುತ್ತಿದೆ. ಅಬಕಾರಿ ಇಲಾಖೆಯ ಸಿಬ್ಬಂದಿಯು ಸದಾಕಾಲ ಜಾಗೃತರಾಗಿದ್ದು ನಿರಂತರ ದಾಳಿ ಕಾರ್ಯ ನಡೆಸಿ, ಯಾವುದೇ ಅಕ್ರಮ ಮದ್ಯ ಮಾರಾಟವಾಗದಂತೆ ಎಚ್ಚರಿಕೆ ವಹಿಸುವಂತೆ ನಿರ್ದೇಶಿಸಲಾಗಿದೆ.

ಸನ್ನದೇತರ ಪ್ರದೇಶಗಳಲ್ಲಿ ಮದ್ಯ ಮಾರಾಟವಾಗುತ್ತಿರುವ ಬಗ್ಗೆ ಮೊಕದ್ದಮೆಗಳನ್ನು ದಾಖಲು ಮಾಡಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ. ಅಕ್ರಮ ಮದ್ಯ ಮಾರಾಟ ಪ್ರಕರಣಗಳನ್ನು ತಡೆಗಟ್ಟಲು ಜನಜಾಗೃತಿ ಮೂಡಿಸಲು ಗ್ರಾಮಸಭೆ/ ವಾರ್ಡ್‌ಸಭೆಗಳನ್ನು ನಡೆಸುತ್ತಿದ್ದು, ಕರ್ನಾಟಕ ಅಬಕಾರಿ ಕಾಯ್ದೆಯ ಕಲಂ 50 ರಂತೆ ಅಬಕಾರಿ ಅಕ್ರಮಗಳನ್ನು ತಡೆಗಟ್ಟುವಲ್ಲಿ ತಿಳುವಳಿಕೆ ಪತ್ರಗಳನ್ನು ಸಂಬಂಧಿಸಿದ ಎಲ್ಲರಿಗೂ ಜಾರಿ ಮಾಡಲಾಗುತ್ತಿದೆ.

ಮದ್ಯ ಮಾರಾಟ

378(524); ಶ್ರೀ ಪುಟ್ಟಣ್ಣಯ್ಯ ಕೆ ಎಸ್ (ಮೇಲುಕೋಟೆ)

ಅ) ಗ್ರಾಮಾಂತರ ಪ್ರದೇಶದ ಎಲ್ಲಾ ವೆಟ್ಟಿಗೆ ಅಂಗಡಿಗಳಲ್ಲಿ ಮದ್ಯವನ್ನು ಅನಧಿಕೃತವಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ. ಯಾವುದೇ ಪರವಾನಗಿ ಇಲ್ಲದೆ ಮಾರಾಟ ಮಾಡುತ್ತಿರುವ ಈ ದಂಧೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಸತೀಶ ಲಕ್ಷಣರಾವ್ ಜಾರಕಿಹೋಳಿ (ಅಬಕಾರಿ ಸಚಿವರು)

ಅ) ಗ್ರಾಮಾಂತರ ಪ್ರದೇಶದಲ್ಲಿ ಕೆಲವು ಪೆಟ್ಟಿಗೆ ಅಂಗಡಿಗಳಲ್ಲಿ ಮದ್ಯವನ್ನು ಅನಧಿಕೃತವಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಅನಧಿಕೃತ ಸ್ಥಳಗಳಲ್ಲಿ ಮಾರಾಟವಾಗುತ್ತಿರುವ ಇಂತಹ ಮದ್ಯವು ಸರ್ಕಾರಕ್ಕೆ ಪಾವತಿಸಬೇಕಾದ ಅಬಕಾರಿ ಸುಂಕ ಹಾಗೂ ಹೆಚ್ಚುವರಿ ಅಬಕಾರಿ ಸುಂಕವನ್ನು ಮುಂಗಡವಾಗಿ ಪಾವತಿಸಿ ನಂತರ ರಾಜ್ಯದ ಏಕೈಕ ಸರ್ಕಾರಿ ಸ್ವಾಮ್ಯದ ಮದ್ಯ ವಿತರಣಾ ಘಟಕವಾದ ಕರ್ನಾಟಕ ರಾಜ್ಯ ಪಾನೀಯ ನಿಗಮದ ನಿಗದಿತ ಡಿಪೋಗಳಿಂದ ಸರಬರಾಜಾಗಿ ಅಧಿಕೃತ ಮದ್ಯ ಮಾರಾಟ ಮಳಿಗೆಗಳಿಂದ ಮಾರಾಟವಾಗಿರುವುದರಿಂದ ಸರ್ಕಾರಕ್ಕೆ ಯಾವುದೇ ರಾಜಸ್ವ ನಷ್ಟವುಂಟಾಗುವುದಿಲ್ಲ.

ಆದಾಗ್ಯೂ ಅಕ್ರಮವಾಗಿ/ಅನಧಿಕೃತವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ಅಬಕಾರಿ ಜಾರಿ ಮತ್ತು ತನಿಖಾ ಕಾರ್ಯವನ್ನು ಚುರುಕುಗೊಳಿಸಿ ರಸ್ತೆ ಕಾವಲು, ರಾತ್ರಿ ಗಸ್ತು ಹಾಗೂ ಜಾರಿ ಕಾರ್ಯಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸುತ್ತೋಲೆ/ಪತ್ರಗಳ ಮೂಲಕ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

ಅಲ್ಲದೆ, ಈ ಕುರಿತು ಪೊಲೀಸ್ ಇಲಾಖೆಯಲ್ಲಿ ಸ್ಥಾಪಿತವಾಗಿರುವ ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ ಎಂಬ ವಿಶೇಷ ಘಟಕವೂ ಸಹ ನಿರಂತರ ಕಾರ್ಯಾಚರಣೆ ನಡೆಸುತ್ತಿದ್ದು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ 2 ತಿಂಗಳಿಗೊಮ್ಮೆ ನಡೆಯುತ್ತಿರುವ ಸಮನ್ವಯ ಸಮಿತಿ ಸಭೆಯಲ್ಲೂ ಅಬಕಾರಿ ಅಕ್ರಮ ಕುರಿತು ಅಗತ್ಯ ನಿರ್ದೇಶನಗಳನ್ನು ನೀಡಲಾಗುತ್ತಿದೆ. ಅಬಕಾರಿ ಇಲಾಖೆಯ ಸಿಬ್ಬಂದಿಯು ಸದಾಕಾಲ ಜಾಗೃತರಾಗಿದ್ದು, ನಿರಂತರ ದಾಳಿ ಕಾರ್ಯ ನಡೆಸಿ, ಯಾವುದೇ ಅಕ್ರಮ ಮದ್ಯ ಮಾರಾಟವಾಗದಂತೆ ಎಚ್ಚರಿಕೆ ವಹಿಸುವಂತೆ ನಿರ್ದೇಶಿಸಲಾಗಿದೆ.

ಸನ್ನದೇತರ ಪ್ರದೇಶಗಳಲ್ಲಿ ಮದ್ಯ ಮಾರಾಟವಾಗುತ್ತಿರುವ ಬಗ್ಗೆ ಮೊಕದ್ದಮೆಗಳನ್ನು ದಾಖಲು ಮಾಡಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ. ಅಕ್ರಮ ಮದ್ಯ ಮಾರಾಟ ಪ್ರಕರಣಗಳನ್ನು ತಡೆಗಟ್ಟಲು ಜನಜಾಗೃತಿ ಮೂಡಿಸಲು ಗ್ರಾಮಸಭೆ/ವಾರ್ಡ್‌ಸಭೆಗಳನ್ನು ನಡೆಸುತ್ತಿದ್ದು, ಕರ್ನಾಟಕ ಅಬಕಾರಿ ಕಾಯ್ದೆಯ ಕಲಂ 50 ರಂತೆ ಅಬಕಾರಿ ಅಕ್ರಮಗಳನ್ನು ತಡೆಗಟ್ಟುವಲ್ಲಿ ಸಾರ್ವಜನಿಕರ ಜವಾಬ್ದಾರಿ/ಹೊಣೆಗಾರಿಕೆ ಬಗ್ಗೆ ಅರಿವು ಮೂಡುವಂತೆ ತಿಳುವಳಿಕೆ ಪತ್ರಗಳನ್ನು ಸಂಬಂಧಿಸಿದ ಎಲ್ಲರಿಗೂ ಜಾರಿ ಮಾಡಲಾಗುತ್ತಿದೆ

ಪದವಿ ಕಾಲೇಜಿನಲ್ಲಿ ಗುತ್ತಿಗೆ ಆಧಾರದ ನೇಮಕಾತಿ

330(541); ಶ್ರೀ ಗುರು ಪಾಟೀಲ ಶಿರವಾಳ (ಶಹಾಪುರ)

ಅ) ಪದವಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸುಮಾರು ಐದು ವರ್ಷಗಳಿಂದ ಬೋಧಕ ಹಾಗೂ ಭೋಧಕೇತರ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ, ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು;

ಆ) ಪದವಿ ಕಾಲೇಜುಗಳಲ್ಲಿ ಬಿ.ಎಸ್ಸಿ., ಕೋರ್ಸ್‌ಗಳಿಗೆ ಬೇಕಾಗುವ ಪ್ರಯೋಗಾಲಯ ಸಲಕರಣೆಗಳು ಇಲ್ಲದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ಸಲಕರಣೆಗಳನ್ನು ಪೂರೈಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್. ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಇಲ್ಲ.

ಆ) ಬಂದಿದೆ.

ವಿಜ್ಞಾನ ಕೋರ್ಸುಗಳಿಗೆ ಪ್ರಯೋಗಾಲಯ ಸಲಕರಣೆಗಳನ್ನು ಖರೀದಿಸಲು ₹ 5,29,99,938/– ಗಳನ್ನು ಬಿಡುಗಡೆ ಮಾಡಲಾಗಿದೆ.